ಕೋಟಿ ರೂಪಾಯಿಗಳ ವೆಚ್ಚದ ನಾಲ್ಕು ಯೋಜನೆಗಳು ಈಗ ರಾಜ್ಯದಲ್ಲಿ ಜಾರಿಯಲ್ಲಿವೆ. ಕರಾವಳಿ ಪ್ರದೇಶ ಹಾಗೂ ಮಂಗಳೂರು ನಗರಾಭಿವೃದ್ಧಿಗಾಗಿ ಏಷ್ಯನ್ ಅಭಿವೃದ್ಧಿ ಬ್ಯಾಂಕಿನಿಂದ ನೆರವನ್ನು ಪಡೆಯಲು ಉದ್ದೇಶಿಸಿ ಯೋಜನೆಯನ್ನು ರೂಪಿಸಲಾಗುತ್ತಿದೆ. ಯೋಜನೆಯ ವರದಿ ಸಿದ್ದವಾದ ನಂತರ ನೆರವಿನ ಪ್ರಮಾಣ ಸ್ಪಷ್ಟವಾಗಿ ಗೊತ್ತಾಗುತ್ತದೆ.

ಹೊಸ ಜಿಲ್ಲೆಗಳಿಗೆ ಜಿಲ್ಲಾ ನ್ಯಾಯಾಲಯಗಳ ಸ್ಥಾಪನೆ ಬಗ್ಗೆ.

2928:(4124)

ಶ್ರೀ.ವಾಟಾಳ್ ನಾಗರಾಜ್ (ಚಾಮರಾಜನಗರ): ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರ ಶಾಸನ ರಚನೆ, ವಾರ್ತಾ ಮತ್ತು ಪ್ರಚಾರ ಹಾಗೂ ಪ್ರವಾಸೋದ್ಯಮ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಾಮರಾಜನಗರವು ಸೇರಿದಂತೆ 7 ಹೊಸ ಜಿಲ್ಲೆಗಳಲ್ಲಿ ಜಿಲ್ಲಾ ನ್ಯಾಯಾಲಯಗಳನ್ನು ಯಾವಾಗ ಸ್ಥಾಪಿಸಲಾಗುವುದು?

ಆ) ಕರ್ನಾಟಕ ರಾಜ್ಯದಲ್ಲಿ ಎಷ್ಟು ಕಾರ್ಮಿಕ ನ್ಯಾಯಾಲಯಗಳು ಇವೆ?

ಇ) ಕಾರ್ಮಿಕ ನ್ಯಾಯಾಲಯದಲ್ಲಿ ಕೊರತೆ ಇರುವ ನ್ಯಾಯಾಧೀಶರ ಸಂಖ್ಯೆ ಎಷ್ಟು?

ಶ್ರೀ ಎಂ.ಸಿ.ನಾಣಯ್ಯ (ಕಾನೂನು ಸಚಿವರು):

ಅ) ಚಾಮರಾಜನಗರ ಜಿಲ್ಲೆಯೂ ಸೇರಿದಂತೆ ಎಲ್ಲಾ 7 ಹೊಸ ಜಿಲ್ಲೆಗಳಿಗೆ ಜಿಲ್ಲಾ ಮತ್ತು ಸತ್ರನ್ಯಾಯಾಲಯಗಳನ್ನು ಸ್ಥಾಪಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. ಈ ನ್ಯಾಯಾಲಯಗಳಿಗೆ ಹುದ್ದೆಗಳನ್ನು ಸೃಜಿಸುವುದು ಒಳಗೊಂಡಂತೆ ಕಟ್ಟಡಗಳನ್ನು ಗುರುತಿಸುವುದು ಹಾಗೂ ನ್ಯಾಯಾಲಯಗಳನ್ನು ಸ್ಥಾಪಿಸಲು ಅವಶ್ಯವಾದ ಇತರೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಆ) ಕರ್ನಾಟಕ ರಾಜ್ಯದಲ್ಲಿ 12 ಕಾರ್ಮಿಕ ನ್ಯಾಯಾಲಯಗಳಿವೆ.

ಇ) ಈ ನ್ಯಾಯಾಲಯದಲ್ಲಿ ನ್ಯಾಯಾಧೀಶರ ಕೊರತೆ ಇರುವುದಿಲ್ಲ.

ನವ ದೆಹಲಿಯಲ್ಲಿನ ವಾರ್ತಾ ಇಲಾಖೆಯ ಕಾರ್ಯವನ್ನು ಉತ್ತಮ ಪಡಿಸುವುದು.

2929:(4125)

ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ): ಮಾನ್ಯ ವಾರ್ತಾ ಮತ್ತು ಪ್ರಚಾರ